Akashvani : Bengaluru
National Bulletin In Kannada
04.09.2025 : 1310hrs
**ಆಕಾಶವಾಣಿ, ಬೆಂಗಳೂರು**
**ರಾಷ್ಟ್ರೀಯ ವಾರ್ತೆಗಳು**

**ಮುಖ್ಯಾಂಶಗಳು:**

1. ಪ್ರಧಾನಿ ನರೇಂದ್ರ ಮೋದಿ ಸಿಂಗಾಪುರ ಪ್ರಧಾನಿ ಭೇಟಿ ; ಉಭಯ ರಾಷ್ಟ್ರಗಳ ನಡುವಿನ ಸಮಕಾಲೀನ ಸಮಬಂಧಗಳಿಗೆ ಮಾರ್ಗಸೂಚಿ
2. ಪಂಜಾಬ್ ಪ್ರವಾಹ ; ಪರಿಸ್ಥಿತಿ ಅವಲೋಕಿಸಿದ ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌವ್ಹಾಣ್
3. ಜಿಎಸ್‌ಟಿ ಸುಧಾರಣೆಯಿಂದ ಆರೋಗ್ಯ ರಕ್ಷಣಾ ವೆಚ್ಚ ಕಡಿತ - ಸಚಿವ ಜೆ.ಪಿ. ನಡ್ಡಾ
4. ಬಿಹಾರ ಬಿಜೆಪಿ ಜೆಡಿಯು ಬಂದ್ ಕರೆಗೆ ಉತ್ತಮ ಪ್ರತಿಕ್ರಿಯೆ

*********

ಪ್ರಧಾನಿ ನರೇಂದ್ರ ಮೋದಿ ಅವರು ನವದೆಹಲಿಯಲ್ಲಿ ಸಿಂಗಾಪುರ ಪ್ರಧಾನಿ ಲಾರೆನ್ಸ್ ವಾಂಗ್ ಅವರೊಂದಿಗೆ ನಿಯೋಗ ಮಟ್ಟದ ಮಾತುಕತೆಗಳನ್ನು ನಡೆಸುತ್ತಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ಅವರ ಆಹ್ವಾನದ ಮೇರೆಗೆ ವಾಂಗ್ ಭಾರತಕ್ಕೆ ಮೂರು ದಿನಗಳ ಭೇಟಿಯಲ್ಲಿದ್ದಾರೆ. ಈ ಭೇಟಿಯ ಸಂದರ್ಭದಲ್ಲಿ, ಎರಡೂ ದೇಶಗಳ ನಡುವಿನ ದ್ವಿಪಕ್ಷೀಯ ಸಂಬಂಧಗಳ ಸಂಪೂರ್ಣ ವ್ಯಾಪ್ತಿ ಮತ್ತು ಪರಸ್ಪರ ಆಸಕ್ತಿಯ ವಿಷಯಗಳ ಕುರಿತು ಎರಡೂ ಕಡೆಯವರು ಚರ್ಚಿಸುವ ನಿರೀಕ್ಷೆಯಿದೆ. ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್, ಸಿಂಗಾಪುರ ಪ್ರಧಾನಿ ಲಾರೆನ್ಸ್ ವಾಂಗ್ ಅವರನ್ನು ಭೇಟಿ ಮಾಡಿ, ಭಾರತ-ಸಿಂಗಾಪುರ ಸಂಬಂಧಗಳನ್ನು ಬಲಪಡಿಸಲು ಅವರು ನಿರಂತರವಾಗಿ ನೀಡುತ್ತಿರುವ ಪ್ರೋತ್ಸಾಹವನ್ನು ಶ್ಲಾಘಿಸಿದರು. ಪ್ರಧಾನಿ ಮೋದಿ ಮತ್ತು ಸಿಂಗಾಪುರ ಪ್ರಧಾನಿ ನಡುವಿನ ಮಾತುಕತೆಗಳು ಎರಡೂ ರಾಷ್ಟ್ರಗಳ ನಡುವಿನ ಸಮಕಾಲೀನ ಸಂಬಂಧಗಳಿಗೆ ಒಂದು ಮಾರ್ಗಸೂಚಿಯನ್ನು ರೂಪಿಸುತ್ತವೆ ಎಂದು ಸಚಿವ ಜೈಶಂಕರ್ ವಿಶ್ವಾಸ ವ್ಯಕ್ತಪಡಿಸಿದರು.ಪ್ರಧಾನಿ ವಾಂಗ್ ಅವರ ಭೇಟಿಯು ಭಾರತ-ಸಿಂಗಾಪುರ ರಾಜತಾಂತ್ರಿಕ ಸಂಬಂಧಗಳ ೬೦ನೇ ವಾರ್ಷಿಕೋತ್ಸವದೊಂದಿಗೆ ಹೊಂದಿಕೆಯಾಗುತ್ತದೆ ಮತ್ತು ಈ ಪಾಲುದಾರಿಕೆಯನ್ನು ಮತ್ತಷ್ಟು ಬಲಪಡಿಸಲು ಎರಡೂ ದೇಶಗಳ ನಿರಂತರ ಬದ್ಧತೆಯನ್ನು ಪುನರುಚ್ಚರಿಸುತ್ತದೆ. ಈ ಭೇಟಿಯು ಎರಡೂ ರಾಷ್ಟ್ರಗಳ ಪ್ರಧಾನ ಮಂತ್ರಿಗಳಿಗೆ ಪರಸ್ಪರ ಆಸಕ್ತಿಯ ಪ್ರಾದೇಶಿಕ ಮತ್ತು ಅಂತಾರಾಷ್ಟ್ರೀಯ ವಿಷಯಗಳಲ್ಲಿ ತೊಡಗಿಸಿಕೊಳ್ಳಲು ಅವಕಾಶವನ್ನು ಒದಗಿಸುತ್ತದೆ. ಆಕ್ಟ್ ಈಸ್ಟ್ ನೀತಿ ಸೇರಿದಂತೆ ಭಾರತಕ್ಕೆ ಸಿಂಗಾಪುರ ಪ್ರಮುಖ ಪಾಲುದಾರ ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ. ಕಳೆದ ವರ್ಷ ಸೆಪ್ಟೆಂಬರ್‌ನಲ್ಲಿ ಪ್ರಧಾನಿ ನರೇಂದ್ರ ಮೋದಿಯವರ ಸಿಂಗಾಪುರ ಭೇಟಿಯ ಸಮಯದಲ್ಲಿ ಎರಡೂ ರಾಷ್ಟ್ರಗಳ ನಡುವಿನ ದ್ವಿಪಕ್ಷೀಯ ಸಂಬಂಧಗಳನ್ನು ಸಮಗ್ರ ಕಾರ್ಯತಂತ್ರದ ಪಾಲುದಾರಿಕೆಯಾಗಿ ಬದಲಾಯಿತು.

*********

ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಅವರು ತೀವ್ರವಾಗಿ ಪ್ರವಾಹ ಪೀಡಿತವಾಗಿರುವ ಈ ಗಡಿ ರಾಜ್ಯದ ಪ್ರಸ್ತುತ ಪರಿಸ್ಥಿತಿಯನ್ನು ಅವಲೋಕಿಸಲು ಪಂಜಾಬ್‌ಗೆ ಆಗಮಿಸಿದ್ದಾರೆ. ಪಂಜಾಬ್ ರಾಜ್ಯಪಾಲ ಗುಲಾಬ್ ಚಂದ್ ಕಟಾರಿಯಾ ಅವರು ಅಮೃತಸರ, ಪಠಾಣ್‌ಕೋಟ್, ಗುರುದಾಸ್ಪುರ್, ತರಣ್ ತರಣ್ ಮತ್ತು ಫಿರೋಜ್‌ಪುರ್ ಸೇರಿದಂತೆ ರಾಜ್ಯದ ಐದು ಹೆಚ್ಚು ಪೀಡಿತ ಜಿಲ್ಲೆಗಳಲ್ಲಿನ ಪ್ರವಾಹ ಪರಿಸ್ಥಿತಿಯ ಕುರಿತು ಸಚಿವರಿಗೆ ವಿವರವಾದ ವರದಿ ಸಲ್ಲಿಸಿ, ಈ ಪ್ರದೇಶಗಳಲ್ಲಿನ ವಾಸ್ತವಿಕತೆಯ ಬಗ್ಗೆ ಕೃಷಿ ಸಚಿವರಿಗೆ ಮಾಹಿತಿ ನೀಡಿದ್ದಾರೆ. ಜೀವ, ಆಸ್ತಿ, ಬೆಳೆಗಳು ಮತ್ತು ಮೂಲಸೌಕರ್ಯಗಳಿಗೆ ಉಂಟಾದ ವ್ಯಾಪಕ ಹಾನಿ ಮತ್ತು ವಿವಿಧ ಸಂಸ್ಥೆಗಳ ಸಮನ್ವಯದೊಂದಿಗೆ ರಾಜ್ಯ ಸರ್ಕಾರವು ತೆಗೆದುಕೊಳ್ಳುತ್ತಿರುವ ಪರಿಹಾರ ಮತ್ತು ಪುನರ್ವಸತಿ ಕ್ರಮಗಳ ಬಗ್ಗೆ ಮಾಹಿತಿ ನೀಡಿದ್ದಾರೆ. ಪ್ರವಾಹ ಪೀಡಿತ ಜನರ ಅಹವಾಲು ಸ್ವೀಕರಿಸಿ ತಕ್ಷಣದ ಅವಶ್ಯಕತೆಗಳನ್ನು ನಿರ್ಣಯಿಸಲು ಚೌಹಾಣ್ ಇಂದು ಪಂಜಾಬ್‌ಗೆ ಒಂದು ದಿನದ ಭೇಟಿಯಲ್ಲಿದ್ದಾರೆ. ನಂತರ ಕೇಂದ್ರ ಮತ್ತು ರಾಜ್ಯ ಸರ್ಕಾರದ ಸಂಬಂಧಪಟ್ಟ ಅಧಿಕಾರಿಗಳ ಪರಿಶೀಲನಾ ಸಭೆಯನ್ನು ನಡೆಸಲಿದ್ದಾರೆ. ರಾಜ್ಯಕ್ಕೆ ತ್ವರಿತ ಪರಿಹಾರ ಮತ್ತು ಪುನರ್ವಸತಿಗಾಗಿ ಅಗತ್ಯ ನೆರವು ನೀಡುವಲ್ಲಿ ಕೇಂದ್ರ ಸರ್ಕಾರದಿಂದ ಸಂಪೂರ್ಣ ಬೆಂಬಲ ದೊರೆಯಲಿದೆ ಎಂದು ಅವರು ಭರವಸೆ ನೀಡಿದ್ದಾರೆ.

*********

ರಕ್ಷಣಾ ವಿಭಾಗದ ಮೊದಲ ಸಾಲಿನ ಗಡಿ ಭದ್ರತಾ ಪಡೆ ಪಾಕಿಸ್ತಾನದ ಗಡಿಯನ್ನು ನಿರ್ವಹಿಸುವುದರ ಜೊತೆಗೆ, ತೀವ್ರವಾಗಿ ಪ್ರವಾಹ ಪೀಡಿತ ಗಡಿ ರಾಜ್ಯ ಪಂಜಾಬ್‌ನಲ್ಲಿ ಸಿಲುಕಿರುವವರನ್ನು ಸುರಕ್ಷಿತ ಸ್ಥಳಗಳಿಗೆ ಕರೆತರಲು ಎಲ್ಲಾ ಪ್ರಯತ್ನ ಮಾಡುತ್ತಿದೆ. ಗುರುದಾಸ್ಪುರ, ಫಿರೋಜ್ಪುರ, ಅಮೃತಸರ ಮತ್ತು ಪಠಾಣ್‌ಕೋಟ್‌ಗಳಿಂದ ನೂರಾರು ಗ್ರಾಮಸ್ಥರನ್ನು ಸುರಕ್ಷಿತ ಸ್ಥಳಗಳಿಗೆ ಸ್ಥಳಾಂತರಿಸಲಾಗಿದೆ ಮತ್ತು ಸಂಬಂಧಪಟ್ಟ ಜಿಲ್ಲಾಡಳಿತಗಳ ಸಮನ್ವಯದೊಂದಿಗೆ ಪರಿಹಾರ ಕ್ರಮಗಳನ್ನು ಕೈಗೊಳ್ಳಲಾಗಿದೆ. ಗಡಿ ಪ್ರದೇಶಗಳಲ್ಲಿನ ಪ್ರವಾಹದಿಂದ ತಮ್ಮದೇ ಆದ ಗಡಿ ಹೊರಠಾಣೆಗಳು ಮುಳುಗಿದ್ದರೂ, ಪಂಜಾಬ್‌ನ ಗಡಿ ನಿವಾಸಿಗಳೊಂದಿಗೆ ರಕ್ಷಣಾ ಪಡೆ ಆಧಾರಸ್ತಂಭವಾಗಿ ನಿಂತಿದೆ. ಪಂಜಾಬ್ ಗಡಿನಾಡಿನ ಬಿಎಸ್‌ಎಫ್‌ನ ಇನ್ಸ್‌ಪೆಕ್ಟರ್ ಜನರಲ್ ಡಾ. ಅತುಲ್ ಫುಲ್ಜುಲೆ ಈ ಬಿಕ್ಕಟ್ಟಿನ ಸಮಯದಲ್ಲಿ ಪಡೆಗೆ ಸಂಪೂರ್ಣ ಬೆಂಬಲವನ್ನು ಭರವಸೆ ನೀಡಿದ್ದಾರೆ. ತೀವ್ರವಾಗಿ ಗಾಯಗೊಂಡವರು ಮತ್ತು ಅನಾರೋಗ್ಯ ಪೀಡಿತರನ್ನು ವಿಮಾನದ ಮೂಲಕ ಸಾಗಿಸುವುದರಿಂದ ಹಿಡಿದು, ವೈದ್ಯಕೀಯ ನೆರವು ನೀಡುವುದು, ಪಡಿತರ ಮತ್ತು ಮೇವು ವಿತರಿಸುವುದರವರೆಗೆ ಜವಾನರು ತಮ್ಮ ಚಾಪರ್‌ಗಳು ಮತ್ತು ದೋಣಿಗಳೊಂದಿಗೆ ಈ ಮಾನವೀಯ ಪ್ರಯತ್ನದಲ್ಲಿ ತೊಡಗಿದ್ದಾರೆ. ಪಂಜಾಬ್ ಗಡಿಯಲ್ಲಿ ಮಾದಕವಸ್ತು ಕಳ್ಳಸಾಗಣೆ ಪ್ರಯತ್ನಗಳನ್ನು ಸೈನಿಕರು ವಿಫಲಗೊಳಿಸಿದ್ದಾರೆ.

*********

ಜಿಎಸ್‌ಟಿ ಸುಧಾರಣೆಗಳು ಆರೋಗ್ಯ ರಕ್ಷಣಾ ವೆಚ್ಚವನ್ನು ಕಡಿಮೆ ಮಾಡುತ್ತದೆ ಮತ್ತು ಜನರ ಜೀವನವನ್ನು ಸುಧಾರಿಸುತ್ತದೆ ಎಂದು ಕೇಂದ್ರ ಆರೋಗ್ಯ ಸಚಿವ ಜೆ.ಪಿ ನಡ್ಡಾ ಹೇಳಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ, ಪ್ರಧಾನಿ ನರೇಂದ್ರ ಮೋದಿಯವರ ಮುಂದಿನ ಪೀಳಿಗೆಯ ಜಿಎಸ್‌ಟಿ ಸುಧಾರಣೆಗಳು ಬಡವರು ಮತ್ತು ಮಧ್ಯಮ ವರ್ಗದವರ ಅಭಿವೃದ್ಧಿಗೆ ಸರ್ಕಾರದ ಬದ್ಧತೆಯನ್ನು ಪುನರುಚ್ಚರಿಸುತ್ತವೆ ಎಂದು ನಡ್ಡಾ ಹೇಳಿದ್ದಾರೆ. ಕ್ಯಾನ್ಸರ್ ಮತ್ತು ಅಪರೂಪದ ಕಾಯಿಲೆಗಳ ಚಿಕಿತ್ಸೆ ಸೇರಿದಂತೆ ೩೬ ಜೀವ ಉಳಿಸುವ ಔಷಧಿಗಳ ಮೇಲಿನ ಜಿಎಸ್‌ಟಿಯನ್ನು ಶೂನ್ಯ ಶೇಕಡಾಕ್ಕೆ ಇಳಿಸಲಾಗಿದೆ ಎಂದು ಅವರು ಹೇಳಿದರು. ಆರೋಗ್ಯ ಮತ್ತು ಜೀವ ವಿಮೆಗೆ ಜಿಎಸ್‌ಟಿ ವಿನಾಯಿತಿ ನೀಡಲಾಗಿದೆ. ಔಷಧಿಗಳು, ವೈದ್ಯಕೀಯ ಸಾಧನಗಳು ಮತ್ತು ರೋಗನಿರ್ಣಯದ ಮೇಲಿನ ಜಿಎಸ್‌ಟಿಯನ್ನು ಸಹ ಕಡಿಮೆ ಮಾಡಲಾಗಿದೆ. ಈ ನಿರ್ಧಾರವು ಎಲ್ಲರಿಗೂ ಕೈಗೆಟುಕುವ ಆರೋಗ್ಯ ರಕ್ಷಣೆಯತ್ತ ಒಂದು ದೊಡ್ಡ ಹೆಜ್ಜೆಯಾಗಿದೆ ಎಂದು ಸಚಿವರು ಹೇಳಿದರು.

*********

ಬಿಹಾರದಲ್ಲಿ ಆಡಳಿತಾರೂಢ ಬಿಜೆಪಿ ಮತ್ತು ಜೆಡಿಯು ನೇತೃತ್ವದ ಎನ್‌ಡಿಎ ಕರೆ ನೀಡಿರುವ ರಾಜ್ಯ ಬಂದ್‌ಗೆ ಉತ್ತಮ ಪ್ರತಿಕ್ರಿಯೆ ದೊರೆತಿದೆ. ಪ್ರಧಾನಿ ನರೇಂದ್ರ ಮೋದಿ ಮತ್ತು ಅವರ ತಾಯಿಯನ್ನು ಗುರಿಯಾಗಿಸಿಕೊಂಡು ದರ್ಭಾಂಗಾದಲ್ಲಿ ಕಾಂಗ್ರೆಸ್ ಮತ್ತು ರಾಷ್ಟ್ರೀಯ ಜನತಾ ದಳ ವೇದಿಕೆಯಿಂದ ಮಾಡಿದ ಅವಹೇಳನಕಾರಿ ಹೇಳಿಕೆಗಳನ್ನು ವಿರೋಧಿಸಿ ಎನ್‌ಡಿಎ ಈ ಬಂದ್‌ಗೆ ಕರೆ ನೀಡಿತ್ತು. ಬಿಜೆಪಿ ಮತ್ತು ಜನತಾ ದಳ ಯುನೈಟೆಡ್ ಸೇರಿದಂತೆ ಎನ್‌ಡಿಎ ಘಟಕ ಪಕ್ಷಗಳ ನಾಯಕರು ಬೆಳಿಗ್ಗೆಯಿಂದ ವಿವಿಧ ಸ್ಥಳಗಳಲ್ಲಿ ಧರಣಿ ಮತ್ತು ಪ್ರದರ್ಶನಗಳನ್ನು ನಡೆಸುತ್ತಿದ್ದಾರೆ. ಪಾಟ್ನಾ, ಬೇಗುಸರಾಯ್, ಮುಂಗೇರ್, ಭಾಗಲ್ಪುರ್, ಶಿಯೋಹರ್ ಮತ್ತು ಭೋಜ್ಪುರ್ ಸೇರಿದಂತೆ ಎಲ್ಲಾ ಜಿಲ್ಲೆಗಳಲ್ಲಿ ಬಂದ್ ನ ಪರಿಣಾಮ ಕಂಡುಬರುತ್ತಿದೆ. ಈ ಅವಧಿಯಲ್ಲಿ, ಬಿಜೆಪಿ ಮತ್ತು ಅದರ ಮಿತ್ರಪಕ್ಷಗಳ ಶಾಸಕರು, ಸಂಸದರು, ಜಿಲ್ಲಾ ಅಧ್ಯಕ್ಷರು ಮತ್ತು ಹಿರಿಯ ನಾಯಕರು ಬೀದಿಗಿಳಿದು ಬಂದ್ ನಡೆಸಿ ಕಾಂಗ್ರೆಸ್ ಮತ್ತು ರಾಷ್ಟ್ರೀಯ ಜನತಾ ದಳದ ವಿರುದ್ಧ ಘೋಷಣೆಗಳನ್ನು ಕೂಗಿದ್ದಾರೆ.ವಿವಿಧ ಎನ್‌ಡಿಎ ಪಕ್ಷಗಳ ಮಹಿಳಾ ಘಟಕಗಳು ಹಲವಾರು ಸ್ಥಳಗಳಲ್ಲಿ ಧರಣಿ ಮತ್ತು ಪ್ರತಿಭಟನೆಗಳನ್ನು ನಡೆಸಿವೆ. ಕೆಲವು ಸ್ಥಳಗಳಲ್ಲಿ, ಬಂದ್ ಬೆಂಬಲಿಗರು ವಾಹನ ಸಂಚಾರಕ್ಕೆ ಅಡ್ಡಿಪಡಿಸಿದ್ದಾರೆ, ಇದರಿಂದಾಗಿ ರಸ್ತೆಗಳಲ್ಲಿ ಸಂಚಾರ ಕಡಿಮೆಯಾಗಿದೆ. ಪ್ರಮುಖ ನಗರ ಕೇಂದ್ರಗಳು ಮತ್ತು ರಾಜ್ಯದ ಇತರ ಪ್ರದೇಶಗಳಲ್ಲಿ ಅಂಗಡಿಗಳು ಮತ್ತು ಮಾರುಕಟ್ಟೆಗಳು ಮುಚ್ಚಲ್ಪಟ್ಟಿವೆ.

*********

ನಾಳೆ ದೇಶಾದ್ಯಂತ ರಾಷ್ಟ್ರೀಯ ಶಿಕ್ಷಕರ ದಿನವನ್ನು ಆಚರಿಸಲಾಗುತ್ತದೆ. ಆಕ್ಸ್‌ಫರ್ಡ್ ವಿಶ್ವವಿದ್ಯಾಲಯದಲ್ಲಿ ಶಿಕ್ಷಕ, ಪ್ರಾಧ್ಯಾಪಕ ಮತ್ತು ಭಾರತದಲ್ಲಿ ಶಿಕ್ಷಣ ಕ್ಷೇತ್ರದಲ್ಲಿ ಪರಿವರ್ತನೆಯ ಸುಧಾರಣೆಗಳನ್ನು ತಂದ ತತ್ವಜ್ಞಾನಿಯಾಗಿದ್ದ ಮಾಜಿ ರಾಷ್ಟ್ರಪತಿ ಸರ್ವಪಲ್ಲಿ ರಾಧಾಕೃಷ್ಣ ಅವರ ಜನ್ಮದಿನವನ್ನು ಶಿಕ್ಷಕರ ದಿನಾಚರಣೆಯಾಗಿ ಆಚರಿಸಲಾಗುತ್ತದೆ. ಅವರ ಜನ್ಮದಿನದಂದು, ಶಿಕ್ಷಕರಾಗಿ ಅತ್ಯುತ್ತಮ ಸೇವೆ ಸಲ್ಲಿಸಿದ ದೇಶಾದ್ಯಂತದ ೪೫ ಶಿಕ್ಷಕರಿಗೆ ನಾಳೆ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಪ್ರಶಸ್ತಿ ನೀಡಿ ಗೌರವಿಸಲಿದ್ದಾರೆ.

*********

ಭಾರತದ ಮುಖ್ಯ ನ್ಯಾಯಮೂರ್ತಿ ಭೂಷಣ್ ರಾಮಕೃಷ್ಣ ಗವಾಯಿ ಇಂದು ಕಠ್ಮಂಡುವಿಗೆ ಭೇಟಿ ನೀಡಿ, ಭಾರತ-ನೇಪಾಳ ನ್ಯಾಯಾಂಗ ಸಂವಾದವನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ಅಧಿಕಾರ ವಹಿಸಿಕೊಂಡ ನಂತರ ನೇಪಾಳಕ್ಕೆ ಅವರ ಮೊದಲ ಭೇಟಿ ಇದಾಗಿದೆ. ಸಿಜೆಐ ಗವಾಯಿ ಭಾರತದ ೫೨ನೇ ಮುಖ್ಯ ನ್ಯಾಯಮೂರ್ತಿ. ನಾಳೆ ಅವರು, ಕಠ್ಮಂಡುವಿನಲ್ಲಿ ನಡೆಯುವ ನೇಪಾಳ-ಭಾರತ ನ್ಯಾಯಾಂಗ ಸಂವಾದದಲ್ಲಿ ಭಾಗವಹಿಸಲಿದ್ದಾರೆ ಮತ್ತು ನೇಪಾಳದ ಮುಖ್ಯ ನ್ಯಾಯಮೂರ್ತಿ ಪ್ರಕಾಶ್‌ಮನ್ ಸಿಂಗ್ ರಾವತ್ ಅವರೊಂದಿಗೆ ವಿಶೇಷ ಸಭೆ ನಡೆಸಲಿದ್ದಾರೆ. ಅವರು ಬೌದ್ಧ ಸಾಂಸ್ಕೃತಿಕ ನಗರವಾದ ಲುಂಬಿನಿ ಹಾಗೂ ಕಠ್ಮಂಡುವಿನ ಯುನೆಸ್ಕೋ ಸಾಂಸ್ಕೃತಿಕ ಪರಂಪರೆಯ ತಾಣಗಳಾದ ಪಠಾಣ್ ಮತ್ತು ಪಶುಪತಿನಾಥಕ್ಕೆ ಭೇಟಿ ನೀಡಲಿದ್ದಾರೆ.

*********

ದೆಹಲಿಯಲ್ಲಿ ಯಮುನಾ ನದಿ ಇಂದು ಅಪಾಯದ ಮಟ್ಟ ಮೀರಿ ಹರಿಯುತ್ತಿದೆ. ಕಳೆದ ಕೆಲವು ದಿನಗಳಿಂದ ರಾಷ್ಟ್ರ ರಾಜಧಾನಿಯಲ್ಲಿ ನಿರಂತರ ಭಾರೀ ಮಳೆಯಾಗುತ್ತಿರುವುದರಿಂದ ನೀರಿನ ಮಟ್ಟ ಏರಿಕೆಯಾಗಿದ್ದು, ಮುನ್ನೆಚ್ಚರಿಕೆಯಾಗಿ, ತಗ್ಗು ಪ್ರದೇಶಗಳಲ್ಲಿ ವಾಸಿಸುವ ಜನರನ್ನು ಈಗಾಗಲೇ ಸುರಕ್ಷಿತ ಸ್ಥಳಗಳಿಗೆ ಸ್ಥಳಾಂತರಿಸಲಾಗಿದೆ. ನೀರಿನ ಮಟ್ಟವು ೨೦೭ ಮೀಟರ್‌ಗಿಂತಲೂ ಹೆಚ್ಚು ಎತ್ತರದಲ್ಲಿ ಹರಿಯುತ್ತಿದೆ. ನೀರು ನಿಂತ ಕಾರಣ ಕಾಶ್ಮೀರಿ ಗೇಟ್‌ನಲ್ಲಿ ಭಾರಿ ಸಂಚಾರ ದಟ್ಟಣೆ ಉಂಟಾಗಿದೆ. ದೆಹಲಿ ಸರ್ಕಾರವು ಪರಿಸ್ಥಿತಿಯನ್ನು ನಿರಂತರವಾಗಿ ಮೇಲ್ವಿಚಾರಣೆ ಮಾಡುತ್ತಿದ್ದು, ಪ್ರಸ್ತುತ ಪರಿಸ್ಥಿತಿ ನಿಯಂತ್ರಣದಲ್ಲಿದೆ ಎಂದು ದೆಹಲಿ ಸಚಿವ ಮಂಜಿಂದರ್ ಸಿಂಗ್ ಸಿರ್ಸಾ ಹೇಳಿದ್ದಾರೆ.

*********

ಮುಂದಿನ ಮೂರು ದಿನಗಳ ಕಾಲ ಗುಜರಾತ್ ಪ್ರದೇಶದಲ್ಲಿ ಮತ್ತು ಪಶ್ಚಿಮ ಮಧ್ಯಪ್ರದೇಶದಲ್ಲಿ ನಾಳೆಯವರೆಗೆ ಭಾರೀ ಮಳೆಯಾಗುವ ಸಾಧ್ಯತೆ ಇದೆ ಎಂದು ಭಾರತೀಯ ಹವಾಮಾನ ಇಲಾಖೆ ರೆಡ್ ಅಲರ್ಟ್ ನೀಡಿದೆ. ವಿದರ್ಭ, ಛತ್ತೀಸ್‌ಗಢ ಮತ್ತು ಒಡಿಶಾದ ಕೆಲವು ಸ್ಥಳಗಳಲ್ಲಿ ಮಳೆಯಾಗುವ ಸಾಧ್ಯತೆ ಇದೆ. ಪೂರ್ವ ರಾಜಸ್ಥಾನ, ಕೊಂಕಣ ಮತ್ತು ಗೋವಾ, ಮಧ್ಯ ಮಹಾರಾಷ್ಟ್ರ ಮತ್ತು ಪಶ್ಚಿಮ ಮಧ್ಯಪ್ರದೇಶದಲ್ಲಿ ಭಾರೀ ಮಳೆಯಾಗುವ ಸಾಧ್ಯತೆ ಇದೆ ಎಂದು ಐಎಂಡಿ ತಿಳಿಸಿದೆ. ದಕ್ಷಿಣ ಒಳನಾಡು ಕರ್ನಾಟಕ ಮತ್ತು ತೆಲಂಗಾಣದ ಪ್ರತ್ಯೇಕ ಸ್ಥಳಗಳಲ್ಲಿ ಗುಡುಗು ಸಹಿತ ಮಿಂಚು ಮತ್ತು ಬಿರುಗಾಳಿ ಬೀಸುವ ಸಾಧ್ಯತೆ ಇದೆ ಎಂದು ಇಲಾಖೆ ಮುನ್ಸೂಚನೆ ನೀಡಿದೆ. ದೆಹಲಿಯ ವಿವಿಧ ಭಾಗಗಳಲ್ಲಿ ನಿನ್ನೆ ರಾತ್ರಿಯಿಂದ ಗುಡುಗು ಮತ್ತು ಮಿಂಚಿನೊಂದಿಗೆ ಹಗುರವಾದ ಮಳೆಯಾಗುತ್ತಿದೆ.

*****END****